ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE : 26/6/20

# ಲಾಕ್‌ಡೌನ್ ಬದಲು ವ್ಯವಸ್ಥೆ ಸುಧಾರಣೆ

## ಸಿಎಂ ನೇತೃತ್ವದ ಉನ್ನತ ಮಟ್ಟದ ಸಭೆಯಲ್ಲಿ ಒಲವು | ಇಂದು ಬೆಂಗಳೂರು ಜನಪ್ರತಿನಿಧಿಗಳ ಸಭೆ

■ **ವಿಕ ಸುದ್ದಿಲೋಕ** ಬೆಂಗಳೂರು

ಬೆಂಗಳೂರಿನಲ್ಲಿ ಹೆಚ್ಚುತ್ತಿರುವ ಕೊರೋನಾ ಸೋಂಕು ತಡೆಗಟ್ಟುವುದಕ್ಕೆ ಸಿಎಂ ಯಡಿಯೂರಪ್ಪ ನೇತೃತ್ವದಲ್ಲಿ ಗುರುವಾರ ಉನ್ನತ ಮಟ್ಟದ ಸಭೆ ನಡೆಯಿತು. ಲಾಕ್‌ಡೌನ್ ಜಾರಿ ಸೇರಿದಂತೆ ಮಹತ್ವದ ನಿರ್ಧಾರಗಳ ಬಗ್ಗೆ ಚರ್ಚಿಸುವುದಕ್ಕಾಗಿ ಬೆಂಗಳೂರಿನ ಎಲ್ಲ ಜನಪ್ರತಿನಿಧಿಗಳ ಸಭೆಯನ್ನು ಶುಕ್ರವಾರ ನಡೆಸಲಾಗುತ್ತದೆ.

ಬೆಂಗಳೂರಿನಲ್ಲಿ ಲಾಕ್‌ಡೌನ್ ಮಾಡುವುದಕ್ಕೆ ಕಂದಾಯ ಸಚಿವ ಆರ್.ಅಶೋಕ ಸೇರಿದಂತೆ ಹಿರಿಯ ಸಚಿವರು ಅಸಮ್ಮತಿ ತೋರಿಸಿದ್ದಾರೆ. ಪರ್ಯಾಯ ಮಾರ್ಗದ ಮೂಲಕ ಕೋವಿಡ್ ನಿಯಂತ್ರಿಸುವುದು ಸೂಕ್ತ ಎಂಬ ಅಭಿಪ್ರಾಯ ವ್ಯಕ್ತವಾಗಿದೆ. ಲಾಕ್‌ಡೌನ್ ಬದಲು ವೈದ್ಯ ಸೌಲಭ್ಯಗಳ ಗುಣಮಟ್ಟ ಹೆಚ್ಚಿಸುವುದೇ ಸೂಕ್ತ ಎಂಬ ಅಭಿಪ್ರಾಯ ವ್ಯಕ್ತವಾಗಿದೆ.

**ಸಿಎಂ ನಿರ್ದೇಶನ:** ಬೆಂಗಳೂರಿನಲ್ಲಿ ಸೋಂಕು ಹೆಚ್ಚುತ್ತಿರುವ ಬಗ್ಗೆ ಸಿಎಂ ಕಳವಳ ವ್ಯಕ್ತಪಡಿಸಿದ್ದಾರೆ. ಸೋಂಕಿತರು ಆಸ್ಪತ್ರೆಗೆ ದಾಖಲಾಗಲು ಕಾಯುವ ಸ್ಥಿತಿ ನಿರ್ಮಾಣವಾಗದಂತೆ ನೋಡಿಕೊಳ್ಳಿ ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.



ಗೃಹ ಕಚೇರಿ ಕೃಷ್ಣಾದಲ್ಲಿ ಉನ್ನತ ಮಟ್ಟದ ಸಭೆ ನಡೆಸಿದ ಸಿಎಂ ಬಿಎಸ್‌ವೈ ಬೆಂಗಳೂರಿನಲ್ಲಿ ಹೆಚ್ಚುತ್ತಿರುವ ಕೊರೊನಾ ನಿಯಂತ್ರಣ ಕುರಿತು ಚರ್ಚಿಸಿದರು.

### ಜನ ಪ್ರತಿನಿಧಿಗಳ ಸಭೆ ಇಂದು

ಬೆಂಗಳೂರು ನಗರದಲ್ಲಿ ಕೋವಿಡ್ ಪರಿಸ್ಥಿತಿ ನಿಯಂತ್ರಣಕ್ಕೆ ತರುವ ಬಗ್ಗೆ ಚರ್ಚಿಸಲು ಎಲ್ಲ ಚುನಾಯಿತ ಪ್ರತಿನಿಧಿಗಳ ಜತೆಗೆ ಸಿಎಂ ಯಡಿಯೂರಪ್ಪ ಶುಕ್ರವಾರ ಮಹತ್ವದ ಸಭೆ ನಡೆಸಲಿದ್ದಾರೆ. ಗೃಹ ಕಚೇರಿ ಕೃಷ್ಣಾದಲ್ಲಿ ಬೆಳಗ್ಗೆ 12 ಗಂಟೆಗೆ ಸಭೆ ನಡೆಯಲಿದೆ. ನಗರದ 28 ವಿಧಾನಸಭಾ ಕ್ಷೇತ್ರದ ಚುನಾಯಿತ ಪ್ರತಿನಿಧಿಗಳು ಈ ಸಭೆಯಲ್ಲಿ ಭಾಗವಹಿಸಲಿದ್ದಾರೆ. ಇದರಿಂದ ಕ್ಷೇತ್ರವಾರು ಪರಿಸ್ಥಿತಿ ಅವಲೋಕನ ಸಾಧ್ಯವಾಗಲಿದೆ. ಆ ಬಳಿಕ ವಿಧಾನಸಭಾ ಕ್ಷೇತ್ರ ಅಥವಾ ವಾರ್ಡ್‌ವಾರು ಸೀಲ್‌ಡೌನ್ ಮಾಡಬೇಕೋ ಅಥವಾ ಸಂಪೂರ್ಣವಾಗಿ ಲಾಕ್‌ಡೌನ್ ಜಾರಿಗೆ ತರಬೇಕೋ ಎಂಬ ವಿಚಾರದಲ್ಲಿ ಸ್ಪಷ್ಟತೆ ಸಿಗಲಿದೆ. ಜತೆಗೆ ರಾತ್ರಿ ಕರ್ಫ್ಯೂ ಮತ್ತೆ ಜಾರಿಗೊಳಿಸುವ ವಿಚಾರವೂ ಚರ್ಚೆಯಾಗಲಿದೆ.

### ಸಭೆಯಲ್ಲಿ ತೆಗೆದುಕೊಂಡ ಪ್ರಮುಖ ನಿರ್ಧಾರಗಳು

- ಖಾಸಗಿ ಆಸ್ಪತ್ರೆಗಳ ಜತೆ ಚರ್ಚಿಸಿ ಕೋವಿಡ್ ಚಿಕಿತ್ಸೆಗೆ ಸೂಕ್ತ ವ್ಯವಸ್ಥೆ ಕಲ್ಪಿಸುವುದು.
- ರೋಗ ಲಕ್ಷಣ ಇಲ್ಲದವರಿಗೆ ಕೋವಿಡ್ ಕೇರ್ ಸೆಂಟರ್, ಖಾಸಗಿ ಹೊಟೇಲ್ ಹಾಗೂ ಹಜ್ ಭವನಗಳಲ್ಲಿ ಸೌಲಭ್ಯ ಕಲ್ಪಿಸುವುದು.
- ಆರೋಗ್ಯ ಇಲಾಖೆ ಹಾಗೂ ಬಿಬಿಎಂಪಿ ಸಮನ್ವಯದೊಂದಿಗೆ ಕೋವಿಡ್ ಸೋಂಕಿತರನ್ನು ಆಸ್ಪತ್ರೆಗೆ ದಾಖಲಿಸುವ ವ್ಯವಸ್ಥೆಯನ್ನು ಸುಧಾರಿಸುವುದು.
- ನಗರದಲ್ಲಿ ಲಭ್ಯವಿರುವ ಟೆಂಪೊ ಟ್ರಾವೆಲರ್‌ಗಳನ್ನು ಅಸಿಂಪ್ಟಮ್ ಇರುವ ಸೋಂಕಿತರನ್ನು ಸಾಗಿಸಲು ಬಳಸುವುದು.
- ಪ್ರತಿ ವಿಧಾನಸಭಾ ವ್ಯಾಪ್ತಿಗೂ ಆ್ಯಂಬುಲೆನ್ಸ್ ಸೇವೆ ಒದಗಿಸುವುದು.
- ವಿವಿಧ ಇಲಾಖೆಗಳ ಮಧ್ಯೆ ಸಮನ್ವಯ ಸಾಧಿಸಲು ಜನಪ್ರತಿನಿಧಿಗಳು ಹಾಗೂ ಹಿರಿಯ ಅಧಿಕಾರಿಗಳ ಸಮಿತಿ ರಚನೆ.
- ಸೋಂಕು ಪರೀಕ್ಷಾ ವರದಿ ಕಾಲಮಿತಿಯೊಳಗೆ ಲಭ್ಯವಾಗುವಂತೆ ನೋಡಿಕೊಳ್ಳುವುದು.
- ದೂರುಗಳು ಬರದಂತೆ ನೋಡಿಕೊಳ್ಳಲು ಆಸ್ಪತ್ರೆಗಳು ಹಾಗೂ ಕ್ವಾರಂಟೈನ್ ಕೇಂದ್ರಗಳಿಗೆ ನಿಯಮಿತ ಭೇಟಿ ನೀಡುವುದು.
- ಮೊಬೈಲ್ ಆ್ಯಪ್ ಹಾಗೂ ಪತ್ರಿಕಾ ಪ್ರಕಟಣೆಯ ಮೂಲಕ ಆಸ್ಪತ್ರೆಗಳು ಹಾಗೂ ಅಲ್ಲಿ ಲಭ್ಯವಿರುವ ಹಾಸಿಗೆಗಳ ಬಗ್ಗೆ ಕ್ಷಣಕ್ಷಣಕ್ಕೆ ಮಾಹಿತಿ ನೀಡುವುದು.
- ಆರೋಗ್ಯ ಹಾಗೂ ಬಿಬಿಎಂಪಿ ಅಧಿಕಾರಿಗಳು ಪಾಸಿಟಿವ್ ಪ್ರಕರಣದಲ್ಲಿ ಸೋಂಕಿತರನ್ನು ಸಾಗಿಸುವಾಗ ಸಾರ್ವಜನಿಕವಾಗಿ ಗೊಂದಲವಾಗದಂತೆ ನೋಡಿಕೊಳ್ಳುವುದು.
- ಸೋಂಕಿನಿಂದ ಮೃತಪಟ್ಟವರ ಅಂತ್ಯಕ್ರಿಯೆಗೆ ನಿಯಮ ರೂಪಿಸುವುದು.
- ಸೋಂಕಿತರಿಗಾಗಿ ಕೌನ್ಸೆಲಿಂಗ್ ಕೇಂದ್ರಗಳನ್ನು ಆರಂಭಿಸುವುದು.

**ಅಂತ್ಯಕ್ರಿಯೆಗೆ ಹೊಸ ನಿಯಮ**